ಜಿಲ್ಲಾಧಿಕಾರಿಗಳ ಕಾರ್ಯಾಲಯ ಹಾವೇರಿ-581110
OFFICE OF THE DEPUTY COMMISSIONER, HAVERI, 581110
ದೂರವಾಣಿ : 08375-249044,249015
Téléphone: (Fax) 08375-249088/19.
Email: deo.haveri@gmail.com

**ನಂ :ಆಡಳಿತ-1 :ವಹಿ :16 :2023-24**

**ದಿನಾಂಕ: 17 -8-2023**

**ಗೆ,**

1. ಉಪ ವಿಭಾಗಾಧಿಕಾರಿಗಳು, ಹಾವೇರಿ, ಸವಣೂರು.
2. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾವೇರಿ.
3. ಉಪ ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಹಾವೇರಿ.
4. ತಹಶೀಲ್ದಾರ ಹಾವೇರಿ, ರಾಣೇಬೆನ್ನೂರು, ಹಿರೇಕೆರೂರು, ಬ್ಯಾಡಗಿ, ರಟ್ಟೀಹಳ್ಳಿ, ಸವಣೂರು, ಶಿಗ್ಗಾಂವ ಹಾಗೂ ಹಾನಗಲ್ಲ,

ಮಾನ್ಯರೆ,

**ವಿಷಯ:** ದಿನಾಂಕ: 20-08-2023 ರ ಭಾನುವಾರ ಸದ್ಭಾವನಾ ದಿನವನ್ನಾಗಿ ಪ್ರತಿಜ್ಞೆ ಸ್ವೀಕರಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಅಧೀನ ಕಾರ್ಯದರ್ಶಿಗಳು ಸಿಆಸುಇ (ರಾಜಕೀಯ) ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: ಸಿಆಸುಇ:05:ಪಿಹೆಚ್ಎಲ್:2023 ದಿನಾಂಕ: 16-08-2023.

ಸರ್ಕಾರದ ಉಲ್ಲೇಖಿತ ಸುತ್ತೋಲೆಯಲ್ಲಿನ ನಿರ್ದೇಶನದ ಮೇರೆಗೆ ದಿನಾಂಕ: 20-08-2023ರಂದು ಭಾನುವಾರ ಸದ್ಭಾವನಾ ದಿನವನ್ನಾಗಿ ಆಚರಿಸಬೇಕಾಗಿರುವುದರಿಂದ, ಈ ಸಂಬಂಧವಾಗಿ ನಿಮ್ಮ ಅಧೀನದಲ್ಲಿ ಬರುವ ಭಾರತ ಸ್ಕೌಟ್ಸ್ ಅಂಡ್ ಗೈಡ್ಸ್ ಹಾಗೂ ಯೂತ್ ಅಸೋಸಿಯೇಷನ್ ಸಹಕಾರದೊಂದಿಗೆ ಎಲ್ಲ ಶಾಲಾ ಕಾಲೇಜುಗಳಲ್ಲಿ ದಿನಾಂಕ: 20-08-2023 ರಂದು ಭಾನುವಾರ ಬೆಳಿಗ್ಗೆ 11-00 ಗಂಟೆಗೆ ಸದ್ಭಾವನಾ ದಿನಾಚರಣೆಯನ್ನು ಆಚರಣೆ ಮಾಡಿ ಈ ಬಗ್ಗೆ ಪಾಲನಾ ವರದಿಯನ್ನು ಸಲ್ಲಿಸಲು ಸೂಚಿಸಿದೆ.

**ತಮ್ಮ ವಿಶ್ವಾಸಿ,**

**ಅಪರ ಜಿಲ್ಲಾಧಿಕಾರಿಗಳು,**
**ಹಾವೇರಿ ಜಿಲ್ಲೆ, ಹಾವೇರಿ.**

**ಕರ್ನಾಟಕ ಸರ್ಕಾರ**

**ಸಂಖ್ಯೆ:** ಸಿಆಸುಇ 05 ಪಿಹೆಚ್‌ಎಲ್ 2023

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 16.08.2023.

**ಸುತ್ತೋಲೆ**

**ವಿಷಯ:** "ಸದ್ಭಾವನಾ ದಿನ" ವನ್ನು ಆಚರಿಸುವ ಕುರಿತು.

**ಉಲ್ಲೇಖ:** ಭಾರತ ಸರ್ಕಾರದ ಅಧೀನ ಕಾರ್ಯದರ್ಶಿ, ಇವರ ಪತ್ರ ದಿನಾಂಕ:10/08/2023.

** * **

ಎಲ್ಲಾ ಧರ್ಮ, ಭಾಷೆ ಹಾಗೂ ರಾಜ್ಯಗಳ ಜನರಲ್ಲಿ ಸೌಹಾರ್ದತೆಯನ್ನು ಉತ್ತೇಜಿಸಿ ಎಲ್ಲರಲ್ಲೂ ಸದ್ಭಾವನೆಯನ್ನು ಮೂಡಿಸಿ ಹಿಂಸಾಚಾರವನ್ನು ತ್ಯಜಿಸುವಂತೆ ಮಾಡಲು ಕೇಂದ್ರ ಸರ್ಕಾರದ ಆದೇಶದಂತೆ, ಪ್ರತಿ ವರ್ಷ ಆಗಸ್ಟ್, 20 ರಂದು "ಸದ್ಭಾವನಾ ದಿನ"ವನ್ನು ಆಚರಿಸಲಾಗುತ್ತಿದೆ. ಅದರಂತೆ ಈ ವರ್ಷವೂ ಕೂಡ **ಆಗಸ್ಟ್, 20 ರಂದು ಭಾನುವಾರ "ಸದ್ಭಾವನಾ ದಿನ"**ವನ್ನಾಗಿ ರಾಜ್ಯದಾದ್ಯಂತ ಆಚರಿಸಬೇಕೆಂದು ಸರ್ಕಾರವು ನಿರ್ಧರಿಸಿದೆ. ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಈ ಸಂಬಂಧವಾಗಿ ತಮ್ಮ ಇಲಾಖೆಯ ವ್ಯಾಪ್ತಿಗೆ ಒಳಪಡುವ ಕಛೇರಿಗಳಲ್ಲಿ ಸದ್ಭಾವನಾ ದಿನವನ್ನು ಆಚರಿಸುವುದರೊಂದಿಗೆ ಪ್ರತಿಜ್ಞೆಯನ್ನು ಸ್ವೀಕರಿಸಬೇಕೆಂದು ತಿಳಿಸಿದೆ.

ಈ ಕಾರ್ಯಕ್ರಮವನ್ನು ನಡೆಸಿರುವ ಕುರಿತು ಎಲ್ಲ ಇಲಾಖಾ ಮುಖ್ಯಸ್ಥರುಗಳು ಹಾಗೂ ರಾಜ್ಯದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಸರ್ಕಾರಕ್ಕೆ ಅನುಪಾಲನಾ ವರದಿಯನ್ನು ಕಳುಹಿಸಬೇಕೆಂದು ಸೂಚಿಸಿದೆ.

**(ಮಹೇಶ್. ಆರ್)**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಆಸುಇ (ರಾಜಕೀಯ)

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳು.
2. ಸ್ಥಾನಿಕ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
3. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು, ಕರ್ನಾಟಕ.
4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
5. ಎಲ್ಲಾ ವಿಶ್ವವಿದ್ಯಾನಿಲಯಗಳ ಕುಲಸಚಿವರುಗಳು.
6. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.

# ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆ

ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಭೇದಭಾವವಿಲ್ಲದೇ ಭಾರತದ ಎಲ್ಲ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆಂದು ನಾನು ಪ್ರತಿಜ್ಞೆ ಮಾಡುತ್ತೇನೆ. ಅಲ್ಲದೇ, ವೈಯಕ್ತಿಕವಾಗಿಯಾಗಲೀ ಅಥವಾ ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲ ಭೇದಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇವೆಂದು ಸಹ ಪ್ರತಿಜ್ಞೆ ಮಾಡುತ್ತೇನೆ.